ಕರ್ನಾಟಕ ಸರ್ಕಾರ

ಸಂಖ್ಯೆ:ಎನ್‌ಆರ್‌ಎಸ್(1)106/2010-11

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ
ನಿರ್ದೇಶನಾಲಯ, ಆನಂದರಾವ್ ವೃತ್ತ,
ಬೆಂಗಳೂರು ದಿನಾಂಕ: 24/08/2015
01/09/2015

## ಸುತ್ತೋಲೆ

ವಿಷಯ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಅಧೀನದ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರ ಕರ್ತವ್ಯದ ಪಾಳಿ ಕೆಲಸದ ಕುರಿತು.

*-*-*-*

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರ ಕರ್ತವ್ಯ ಪಾಳಿಗಳ ಬಗ್ಗೆ ಒಂದೊಂದು ಆಸ್ಪತ್ರೆಗಳಲ್ಲಿ ಒಂದೊಂದು ತರಹ ಪಾಳಿಗಳು ಇದ್ದು, ರೋಗಿಗಳಿಗೆ ನಿರಂತರವಾಗಿ ಸೇವೆ ದೊರೆಯುವಂತೆ ಮಾಡಲು ಈ ಪಾಳಿಗಳನ್ನು ಎಲ್ಲಾ ಆಸ್ಪತ್ರೆಗಳಲ್ಲಿ ಒಂದೇ ತರಹ ಮಾಡಿ ಸರಿಪಡಿಸುವ ಉದ್ದೇಶದಿಂದ ಈ ಕೆಳಕಂಡಂತೆ ಪಾಳಿಗಳಲ್ಲಿ ಎಲ್ಲಾ ಶುಶ್ರೂಷಕರು ಕ್ರಮಬದ್ಧವಾಗಿ ದಿನಕ್ಕೆ 3 ಪಾಳಿಗಳಲ್ಲಿ ಕರ್ತವ್ಯ ನಿರ್ವಹಿಸುವಂತೆ ಹಾಗೂ ಈ ಶುಶ್ರೂಷಕರು ಮೂರು ತಿಂಗಳು (ತ್ರೈಮಾಸಿಕ) ಒಂದೇ ವಿಭಾಗದಲ್ಲಿ ಕರ್ತವ್ಯ ಮಾಡಲು ಹಾಗೂ ಈ ಅವಧಿಯಲ್ಲಿ ಆ ವಿಭಾಗದ ಕಾರ್ಯಭಾರವನ್ನು ಹಿರಿಯ ಶುಶ್ರೂಷಕರು ವಹಿಸಿಕೊಂಡು ಸಾರ್ವಜನಿಕ ಸೇವೆಗೆ ಅಡಚಣೆಯಾಗದಂತೆ ಕ್ರಮ ಕೈಗೊಳ್ಳಲು ಸೂಚಿಸಿದೆ.

1. ಮೊದಲನೇ ಪಾಳಿ ಬೆಳಿಗ್ಗೆ 8.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ.
2. ಎರಡನೇ ಪಾಳಿ ಮಧ್ಯಾಹ್ನ 2.00 ಗಂಟೆಯಿಂದ ರಾತ್ರಿ 8.00 ಗಂಟೆವರೆಗೆ.
3. ಮೂರನೇ ಪಾಳಿ ರಾತ್ರಿ 8.00 ಗಂಟೆಯಿಂದ ಮರುದಿನ ಬೆಳಿಗ್ಗೆ 8.00 ಗಂಟೆವರೆಗೆ.

ಸದರಿ ಪಾಳಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರು ವಾರದ ರಜೆಯನ್ನು ಪಡೆಯುವಾಗ ಆ ತಿಂಗಳಿನ ಪ್ರಾರಂಭದಲ್ಲಿಯೇ ಮುಂಗಡವಾಗಿ ವಾರದ ರಜೆಯ ದಿನಾಂಕವನ್ನು ನಿಗದಿಪಡಿಸಿಕೊಂಡು ಸಂಬಂಧಿಸಿದ ಅಧಿಕಾರಿಗಳಿಗೆ ರಜೆಯ ಅರ್ಜಿಯನ್ನು ಸಲ್ಲಿಸತಕ್ಕದ್ದು ಹಾಗೂ ಕರ್ತವ್ಯದ ವೇಳೆಯಲ್ಲಿ ಹಾಜರಿದ್ದು, ಸಾರ್ವಜನಿಕ ಆರೋಗ್ಯ ಸೇವೆಗೆ ಯಾವುದೇ ಅಡಚಣೆಯಾಗದಂತೆ ಕಾರ್ಯನಿರ್ವಹಣೆ ಮಾಡಲು ಆದೇಶಿಸಿದೆ.

24/8/15
ನಿರ್ದೇಶಕರು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕು.ಕ ಸೇವೆಗಳು, ವಿಕಾಸಸೌಧ, ಬೆಂಗಳೂರು.
3. ಆಯುಕ್ತರು, ಆರೋಗ್ಯ ಮತ್ತು ಕು.ಕ ಸೇವೆಗಳು, ಬೆಂಗಳೂರು.
4. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು.
5. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆಗಳು.
6. ವೈದ್ಯಕೀಯ ಅಧೀಕ್ಷಕರು, -----------------------------------------
7. ಮುಖ್ಯ ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ ---------------------------------
8. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ಶುಶ್ರೂಷಕರ ಸಂಘ, ಬೆಂಗಳೂರು
9. ------------------------------------------------------------
10. ಕಛೇರಿ/ಆದೇಶ ಪ್ರತಿ.